**Akashvani : Bangalore**
**Regional Bulletin In Kannada**
**02.05.2025 / 14.30 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**02.05.2025 / 14.30 hrs**
**<><*<><>*><>**

**ಮುಖ್ಯಾಂಶಗಳು**

೧. ೨೦೨೪-೨೫ನೇ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆ ಫಲಿತಾಂಶ ಪ್ರಕಟ; ಎಂದಿನಂತೆ ವಿದ್ಯಾರ್ಥಿನಿಯರೇ ಮೇಲುಗೈ

೨. ಎಸ್ಎಸ್ಎಲ್‌ಸಿ ಪರೀಕ್ಷೆ ಮರು ಎಣಿಕೆ ಮತ್ತು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಆನ್ ಲೈನ್ ಮೂಲಕ ಅವಕಾಶ

೩. ನಾಡಿನಾದ್ಯಂತ ಇಂದು ಶಂಕರಾಚಾರ್ಯ ಜಯಂತಿ ಆಚರಣೆ ; ಶೃಂಗೇರಿ ಪೀಠ ಸೇರಿದಂತೆ ಹಲವೆಡೆ ವಿಶೇಷ ಕಾರ್ಯಕ್ರಮ

೪. ಮಂಗಳೂರು ಹತ್ಯೆ ಪ್ರಕರಣ ಗೃಹಸಚಿವರ ರಾಜಿನಾಮೆಗೆ ಬಿಜೆಪಿ ಆಗ್ರಹ

**<><*<><>*><>**

೨೦೨೪-೨೫ ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಒಂದರ ಫಲಿತಾಂಶ ಇಂದು ಪ್ರಕಟಗೊಂಡಿದೆ. ಈ ಬಾರಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು, ಪುನರಾವರ್ತಿತ ಶಾಲಾ ಮತ್ತು ಖಾಸಗಿ ಅಭ್ಯರ್ಥಿಗಳು ಸೇರಿದಂತೆ ಒಟ್ಟಾರೆ ಶೇಕಡ ೬೨.೩೪ ರಷ್ಟು ಫಲಿತಾಂಶ ಬಂದಿದೆ. ಮೊದಲ ಬಾರಿ ಪರೀಕ್ಷೆ ಎದುರಿಸಿದ ಶಾಲಾ ವಿದ್ಯಾರ್ಥಿಗಳಲ್ಲಿ ಶೇಕಡ ೬೬.೧೪ ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಈ ಕುರಿತಂತೆ ಇಂದು ಸುದ್ದಿಗೋಷ್ಠಿ ನಡೆಸಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಫಲಿತಾಂಶದ ಮಾಹಿತಿ ನೀಡಿದರು. ರಾಜ್ಯಾದ್ಯಂತ ಮಾರ್ಚ್ ೨೧ ರಿಂದ ಏಪ್ರಿಲ್ ೪ ರವರೆಗೆ ಒಟ್ಟು ೨ ಸಾವಿರದ ೮೧೮ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾದ ಪರೀಕ್ಷೆಗೆ ಒಟ್ಟು ೮ ಲಕ್ಷದ ೪೨ ಸಾವಿರದ ೧೭೩ ಅಭ್ಯರ್ಥಿಗಳು ಹಾಜರಾಗಿದ್ದರು. ಒಟ್ಟು ೨೨ ವಿದ್ಯಾರ್ಥಿಗಳು ೬೨೫ ಕ್ಕೆ ೬೨೫ ಅಂಕ ಗಳಿಸಿದ್ದಾರೆ. ೬೫ ವಿದ್ಯಾರ್ಥಿಗಳು ೬೨೪, ೧೦೮ ವಿದ್ಯಾರ್ಥಿಗಳು ೬೨೩ ಅಂಕ ಗಳಿಸಿದ್ದಾರೆ. ಈ ಬಾರಿ ಶೇಕಡಾ ೭೪ ರಷ್ಟು ಬಾಲಕಿಯರು ಉತ್ತೀರ್ಣ ರಾಗುವ ಮೂಲಕ ಮೇಲುಗೈ ಸಾಧಿಸಿದ್ದರೆ ಶೇಕಡಾ ೫೮.೦೭ ರಷ್ಟು ಬಾಲಕರು ಉತ್ತೀರ್ಣರಾಗಿದ್ದಾರೆ. ಪರೀಕ್ಷೆ ಎದುರಿಸಿದ ಒಟ್ಟು ೪ ಲಕ್ಷದ ೫೮೭ ವಿದ್ಯಾರ್ಥಿನಿಯರಲ್ಲಿ ೨ ಲಕ್ಷದ ೯೬ ಸಾವಿರದ ೪೩೮ ವಿದ್ಯಾರ್ಥಿನಿಯರು ತೇರ್ಗಡೆ ಹೊಂದಿದ್ದರೆ, ೩ ಲಕ್ಷದ ೯೦ ಸಾವಿರದ ೩೧೧ ವಿದ್ಯಾರ್ಥಿಗಳಲ್ಲಿ ೨ ಲಕ್ಷದ ೨೬ ಸಾವಿರದ ೬೩೭ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶೇಕಡಾ ೯೧.೧೨ ರಷ್ಟು ಫಲಿತಾಂಶದೊಂದಿಗೆ ದಕ್ಷಿಣ ಕನ್ನಡ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದೆ. ಶೇಕಡಾ ೮೯.೯೬ ರಷ್ಟು ಫಲಿತಾಂಶದೊಂದಿಗೆ ಉಡುಪಿ ಹಾಗೂ ಶೇಕಡಾ ೮೩.೧೯ ರಷ್ಟು ಫಲಿತಾಂಶದೊಂದಿಗೆ ಉತ್ತರ ಕನ್ನಡ ಜಿಲ್ಲೆ ಕ್ರಮವಾಗಿ ೨ನೇ ಹಾಗೂ ೩ನೇ ಸ್ಥಾನದಲ್ಲಿದೆ. ಕಲಬುರ್ಗಿ ಜಿಲ್ಲೆ ಶೇಕಡಾ ೪೨.೪೩ರಷ್ಟು ಫಲಿತಾಂಶದೊಂದಿಗೆ ಕೊನೆ ಸ್ಥಾನದಲ್ಲಿದೆ. ವಿಶೇಷವಾಗಿ ಮೊದಲ ಬಾರಿಗೆ ಪರೀಕ್ಷೆ ಎದುರಿಸಿದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಈ ಬಾರಿ ಒಟ್ಟು ೩೧೯ ಸರ್ಕಾರಿ ಶಾಲೆಗಳು ಶೇಕಡಾ ೧೦೦ರಷ್ಟು ಫಲಿತಾಂಶ ದಾಖಲಿಸಿದೆ. ೫೩ ಅನುದಾನಿತ ಹಾಗೂ ೫೪೯ ಅನುದಾನ ರಹಿತ ಶಾಲೆಗಳು ಸೇರಿದಂತೆ ಒಟ್ಟು ೯೨೧ ಶಾಲೆಗಳು ಶೇಕಡ ೧೦೦ ರಷ್ಟು ಫಲಿತಾಂಶ ದಾಖಲಿಸಿವೆ. ಆದರೆ, ರಾಜ್ಯದ ಆರು ಸರ್ಕಾರಿ ಶಾಲೆಗಳು, ೩೦ ಅನುದಾನಿತ ಹಾಗೂ ೧೦೮ ಅನುದಾನರಹಿತ ಶಾಲೆಗಳು ಶೂನ್ಯ ಫಲಿತಾಂಶ ಪಡೆದಿವೆ.

**<><*<><>*><>**

ಪ್ರಸ್ತುತ ೨೦೨೪-೨೫ ನೇ ಸಾಲಿನಿಂದ ಸ್ಕ್ಯಾನ್ ಪ್ರತಿ, ಮರು ಎಣಿಕೆಗೆ ಮತ್ತು ಮರು ಮೌಲ್ಯ ಮಾಪನಕ್ಕೆ ಕರ್ನಾಟಕ ೧ಮೊಬೈಲ್ ಆಪ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ಕ್ಯಾನ್ ಪ್ರತಿಗಳನ್ನು ಪಡೆಯಲು ಆನ್ಲೈನ್

ಮೂಲಕ ಅರ್ಜಿ ಸಲ್ಲಿಸಲು ಇದೇ ೭ರ ವರೆಗೆ ಅವಕಾಶವಿದೆ. ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯ ಇಲ್ಲದವರು ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್ ಲೋಡ್ ಮಾಡಿ ಶುಲ್ಕ ಪಾವತಿಸಲು ಇದೇ ೮ರ ವರೆಗೆ ಕಾಲವಕಾಶ ನೀಡಲಾಗಿದೆ. ಉತ್ತರ ಪತ್ರಿಕೆಗಳ ಮರು ಎಣಿಕೆ ಮತ್ತು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಇದೇ ೪ರಿಂದ ೧೧ರವರೆಗೆ ಅವಕಾಶ ಇದೆ.  ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಮಾಡಿದಂತೆಯೇ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೂ ಈ ವರ್ಷ ಇನ್ನೆರಡು ಪರೀಕ್ಷೆಯ ಅವಕಾಶ ನೀಡಲಾಗುತ್ತಿದೆ. ಉತ್ತೀರ್ಣರಾಗದಿದ್ದರೆ ಅಥವಾ ಉತ್ತಮ ಅಂಕ ಲಭಿಸದಿದ್ದರೆ ವಿದ್ಯಾರ್ಥಿಗಳು ಇನ್ನು ಎರಡು ಬಾರಿ ಪರೀಕ್ಷೆ ಬರೆಯಬಹುದಾಗಿದೆ. ಎಸ್.ಎಸ್.ಎಲ್.ಸಿ. ೨೦೨೫ರ ಪರೀಕ್ಷೆ -೨ ಅನ್ನು ಇದೇ ೨೬ ರಿಂದ ಜೂನ್ ೨ ವರೆಗೆ ಹಾಗೂ ಪರೀಕ್ಷೆ ೩ ಜೂನ್ ೨೩ ರಿಂದ ೩೦ ರವರೆಗೆ ನಡೆಸಲಾಗುವುದು. ಪರೀಕ್ಷೆ -೨  ಕ್ಕೆ ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಲು ನಾಳೆಯಿಂದ ಇದೇ ಹತ್ತರ ವರೆಗೆ ಅವಕಾಶ ಕಲ್ಪಿಸಿ ಕೊಡಲಾಗಿದೆ.

<><*<><>*><>

ಇಂದು ನಾಡಿನಾದ್ಯಂತ ಅದ್ವೈತ ತತ್ವ ಪ್ರತಿಪಾದಕ, ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಈ ಹಿನ್ನೆಲೆ ಶೃಂಗೇರಿಯ ಶ್ರೀ ಶಾರದಾ ಪೀಠದಲ್ಲಿ ಇಂದು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.  ಜಯಂತ್ಯೋತ್ಸವದ ಭಾಗವಾಗಿ ಶ್ರೀ ಶಂಕರ ಭಗವತ್ ಪಾದಾಚಾರ್ಯರಿಗೆ ವಿಶೇಷ ಪೂಜೆ, ಮಹಾ ಮಂಗಳಾರತಿ ಹಾಗೂ ಕನಕಾಭಿಷೇಕ ನೆರವೇರಿಸಲಾಯಿತು. ಇಂದು ಸಂಜೆ ವೇದ ಸ್ವಸ್ಥಿ ವಾಚನ, ಶ್ರೀ ಶಂಕರ ದಿಗ್ವಿಜಯ ಪಾರಾಯಣೆ, ಅಷ್ಟಾವಧಾನ ಸೇವೆ ಆಯೋಜಿಸಲಾಗಿದೆ. ನಾಳೆ ಬೆಳಿಗ್ಗೆ ಶಂಕರಾಚಾರ್ಯರ ಮಹಾರಥೋತ್ಸವ ಜರುಗಲಿದೆ.  ಶಂಕರಚಾರ್ಯರ ಜಯಂತಿ  ಅಂಗವಾಗಿ ಶೃಂಗೇರಿ ಜಗದ್ಗುರು ಶ್ರೀ ವಿಧುಶೇಖರ ಭಾರತಿ ಅವರು ನಾಡಿನ ಸಮಸ್ತ ಜನತೆಗೆ ಶುಭಾಷಯ ಕೋರಿದ್ದು ಈ ದಿನದ ವಿಶೇಷತೆಯ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ್ದಾರೆ.

**ಧ್ವನಿ: ಶೃಂಗೇರಿ ಜಗದ್ಗುರು ಶ್ರೀ ವಿಧುಶೇಖರ ಭಾರತಿ (೩೧ ಸೆಕೆಂಡ್ಸ್)**

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಶಂಕರಾಚಾರ್ಯರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ.  ಬಳ್ಳಾರಿ ನಗರದ ಸಂಕನಕಲ್ಲು ಶಾರದಾ ಶಂಕರ ಮಠದಲ್ಲಿ, ಶಂಕರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ನಗರದ ವೆಂಟರಮಣ ದೇವಸ್ಥಾನದಿಂದ ಹೊರಟ ಶಂಕರಾಚಾರ್ಯರ ಭಾವಚಿತ್ರದ ಶೋಭಾಯಾತ್ರೆಗೆ ಶಾಸಕ ಭರತ ರೆಡ್ಡಿ ಚಾಲನೆ ನೀಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಇಂದು ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಯನ್ನು ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ  ನಡೆದ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿಶ್ರೀ ಶಂಕರಾಚಾರ್ಯರ ಭಾವಚಿತ್ರಕ್ಕೆ ಶಾಸಕ ಧೀರಜ್ ಮುನಿರಾಜು ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು, ಶಂಕರಾಚಾರ್ಯರು, ದೇಶದ ಮೂಲೆ ಮೂಲೆಗಳಿಗೆ ಸಂಚರಿಸಿ ಅದ್ವೈತ ತತ್ವವನ್ನು ಪ್ರತಿಪಾದಿಸಿದರು. ಸನಾತನ ಧರ್ಮ ವನ್ನು ಜಗತ್ತಿಗೇ ಸಾರಿ, ಧಾರ್ಮಿಕ ನೆಲೆಗಟ್ಟಿನಲ್ಲಿ ಸುಸಂಸ್ಕೃತ ಸಮಾಜ ನಿರ್ಮಾಣ ಮಾಡುವಲ್ಲಿ ಶ್ರಮಿಸಿದ್ದಾರೆ ಎಂದು ಸ್ಮರಿಸಿದರು.

<><*<><>*><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದಿದ್ದು ಅಪರಾಧಿಗಳಿಗೆ ಸರ್ಕಾರ ಹಾಗು ಪೊಲೀಸರ ಭಯ ಇಲ್ಲದಂತಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಆರೋಪಿಸಿದ್ದಾರೆ.ಚಿಕ್ಕಮಗಳೂರು ನಗರದ ತಮ್ಮ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು ಮಂಗಳೂರಿನಲ್ಲಿ ನಿನ್ನೆ ಸಾರ್ವಜನಿಕರ ಎದುರೆ ಸುಹಾಶ್ ಶೆಟ್ಟಿ ಎಂಬ ಯುವಕನನ್ನು ಕೆಲವರು ಗುಂಪುಹತ್ಯೆ ಮಾಡಿದ್ದಾರೆ. ಪೊಲೀಸ್ ಇಲಾಖೆ ಹಾಗೂ ರಾಜ್ಯ ಸರ್ಕಾರ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಬೇಕಿದೆ ಎಂದಿದ್ದು ಈ ಪ್ರಕರಣವನ್ನು ಕೇಂದ್ರ ತನಿಖಾ ಸಂಸ್ಥೆಗಳಿಗೆ ಒಪ್ಪಿಸಬೇಕೆಂದು ಅವರು ಆಗ್ರಹಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು  ಮಾಜಿ ಸಚಿವ ಬಿ.ಶ್ರೀರಾಮುಲು ಆಗ್ರಹಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗೋಷ್ಠಿ ನಡೆಸಿ, ಮಂಗಳೂರಿನ ಸುಹಾಸ್ ಶೆಟ್ಟಿ ಕೊಲೆ ಪ್ರಕರಣವನ್ನು ಉಲ್ಲೇಖಿಸಿ, ಮಾತಾನಾಡಿದ ಅವರು, ಇದುವರೆಗೂ ಸುಹಾಸ್ ಶೆಟ್ಟಿ ಕೊಲೆ ಆರೋಪಿಗಳನ್ನು ಬಂಧಿಸಲಾಗಿಲ್ಲ. ಗೃಹ ಸಚಿವರು  ಆಡಳಿತದಲ್ಲಿ ವಿಫಲರಾಗಿದ್ದಾರೆ. ಹತ್ಯೆ ಪ್ರಕರಣವನ್ನು ಸಿಬಿಐಗೆ ಕೊಡಬೇಕು. ಹಾಗು ಕೂಡಲೇ ನೈತಿಕ ಹೊಣೆ ಹೊತ್ತು ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

<><*<><>*><>

ದೇಶದ ಸಾಂಸ್ಕೃತಿಕ ಬೇರು ಗ್ರಾಮೀಣ ಪ್ರದೇಶದಲ್ಲಿ ಅಡಗಿದೆ ಗ್ರಾಮಗಳಲ್ಲಿ ಕಲೆ, ಕ್ರೀಡೆ, ರೂಢಿ, ಸಂಪ್ರದಾಯಗಳನ್ನು ಉಳಿಸಿ ಬೆಳೆಸುವ ಅವಶ್ಯಕತೆ ಇದೆ ಎಂದು ಇಟಗಿ ಗ್ರಾಮ ಪಂಚಾಯತಿ ಅಧ್ಯಕ್ಷೆ ವಿಜಯಲಕ್ಷ್ಮೀ ಕೊಡಗಾನೂರ ತಿಳಿಸಿದರು. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃಧ್ಧಿ ಹಾಗೂ ಪಂಚಾಯತ ರಾಜ ವಿಶ್ವವಿದ್ಯಾಲಯದ ಆಶ್ರುಯದಲ್ಲಿ ಜರುಗಿದ  ಗ್ರಾಮ ವಾಸ್ತವ್ಯ ಮತ್ತು ಅಧ್ಯಯನ ಶಿಬಿರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><*<><>*><>

ಭಾರತೀಯ ಅಂಚೆ ಇಲಾಖೆಯ ‘ಜ್ಞಾನ ಅಂಚೆ’ ಸೇವೆಯು ಪ್ರಕಾಶಕರಿಗೆ ಹಾಗೂ ಸಾಹಿತ್ಯ ಕ್ಷೇತ್ರಕ್ಕೆ ಉಪಯುಕ್ತ ಯೋಜನೆಯಾಗಿದೆ  ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಜಯದೇವ ಕಡಗಿ ಹೇಳಿದರು. ಗದಗ ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ ‘ಜ್ಞಾನ ಅಂಚೆ’ ಸೇವೆಗೆ ಚಾಲನೆ ನೀಡಿ ಮಾತನಾಡಿದ ಅವರು, ಪಠ್ಯಪುಸ್ತಕ, ಗೈಡ್ ಮತ್ತು ಸಾಹಿತ್ಯ ಕೃತಿಗಳ ರವಾನೆಗಾಗಿಯೇ ಮೀಸಲಿರಿಸಿದ ‘ಜ್ಞಾನ ಅಂಚೆ’ ಸೇವೆ ಸದ್ಬಳಕೆಗೆ ಪಡೆದುಕೊಳ್ಳಬೇಕು ಎಂದರು. ಕನಿಷ್ಠ ೩೦೦ ಗ್ರಾಂನಿಂದ ಗರಿಷ್ಠ ೫ ಕೆ.ಜಿ.ವರೆಗಿನ ಪಾರ್ಸಲ್‌ಗಳನ್ನು ಮಾತ್ರ ‘ಜ್ಞಾನ ಅಂಚೆ’ ಸೇವೆ ಮೂಲಕ ನೀಡಲಾಗುತ್ತದೆ. ಅಷ್ಟೇ, ಅಲ್ಲದೆ ಅಂಚೆ ಇಲಾಖೆಯ ಹಲವು ಷರತ್ತು ಅನ್ವಯವಾಗುತ್ತವೆ. ದೇಶದ ಎಲ್ಲೆಡೆ ಈ ಯೋಜನೆಯಡಿಯಲ್ಲಿ ಸಾಕಷ್ಟು ಬದಲಾವಣೆ ಮಾಡಿರುವ ಹಿನ್ನಲೆಯಲ್ಲಿ ವಿನೂತನ ಮತ್ತು ರಿಯಾಯಿತಿ ದರದಲ್ಲಿ ಪರಿಚಯಿಸಲಾಗುತ್ತಿದೆ ಎಂದರು.

<><*<><>*><>

ವಿಜಯಪುರ ನಗರದಲ್ಲಿನ ವಿವಿಧ ಐತಿಹಾಸಿಕ ಬಾವಿಗಳನ್ನು ಮಹಾನಗರ ಪಾಲಿಕೆಯ ವತಿಯಿಂದ ಪುನಶ್ಚೇತನಗೊಳಿಸಿ, ಬಾವಿಯಲ್ಲಿರುವ ನೀರನ್ನು ಗೃಹ ಬಳಕೆಗಾಗಿ ಸಾರ್ವಜನಿಕರಿಗೆ ಪೂರೈಸುವ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ವಿಜಯಕುಮಾರ ಮೆಕ್ಕಳಕಿ ತಿಳಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರ ನಿರ್ದೇಶನದಂತೆ ಹಾಗೂ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ೨೦೨೪-೨೫ನೇ ಸಾಲಿನ ೧೫ನೇ ಹಣಕಾಸು ಅನುದಾನದಲ್ಲಿ ೯೬.೦೬ ಲಕ್ಷ ರೂಪಾಯಿಗಳಲ್ಲಿ ೬ ಬಾವಿಗಳನ್ನು ಸ್ವಚ್ಛಗೊಳಿಸಿ ಪುನಶ್ಚೇತನಗೊಳಿಸಲಾಗಿದೆ. ೧೩ ಲಕ್ಷ ರೂಪಾಯಿಗಳ ಪಾಲಿಕೆಯ ಅನುದಾನದಲ್ಲಿ ೧೧ ಬಾವಿಗಳ ಸ್ವಚ್ಛತೆ ಕಾಮಗಾರಿ ಕೈಗೊಳ್ಳಲಾಗಿದೆ. ೨೦೨೫-೨೬ನೇ ಸಾಲಿನ ೧೫ನೇ ಹಣಕಾಸು ಆಯೋಗದ ಅನುದಾನದಲ್ಲಿ ೫೦ ಲಕ್ಷ ರೂ.ಪಾಯಿ ಅನುದಾನ ಮೀಸಲಿರಿಸಲಾಗಿದ್ದು, ಒಟ್ಟು ಹೊಸದಾಗಿ ೪ ಬಾವಿಗಳ ಪುನಶ್ಚೇತನ ಕಾರ್ಯ ಪ್ರಗತಿಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕು ಅಕ್ಕಿ ಆಲುರ ಎಪಿಎಂಸಿ ಆವರಣದಲ್ಲಿ ಮೇ ೫ ರಂದು ೩೫ ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕುಸ್ಥಾಪನೆ ಹಾಗೂ ೬೬೦ ಕೋಟಿ ರೂಪಾಯಿಗಳ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಆಗಮಿಸಲಿದ್ದಾರೆ ಎಂದು ಶಾಸಕ ಶ್ರೀನಿವಾಸ ಮಾನೆ ಹಾವೇರಿಯಲ್ಲಿಂದು ತಿಳಿಸಿದ್ದಾರೆ. ಅಂದು ಜರಗುವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಸೇರಿದಂತೆ ಇತರೆ ಸಚಿವರು ಭಾಗವಹಿಸಲಿದ್ದಾರೆ. ಈ ವೇಳೆ ಬಾಳೆಂಬೀಡ ಏತನೀರಾವರಿ ಹಾಗೂ ಚಿಕ್ಕಂಶಿ ಹೊಸೂರು ಯೋಜನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಲಿದ್ದಾರೆ ಎಂದರು.

<><*<><>*><>

ರಾಜ್ಯದ ಬೆಳಗಾವಿ, ಹುಬ್ಬಳ್ಳಿ ಮತ್ತು ಮೈಸೂರಲ್ಲಿ ಹಿರಿಯ ನಾಗರಿಕರಿಗಾಗಿ ಕ್ಲಬ್ ಆರಂಭಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ. ಬೆಳಗಾವಿಯ ಕುಮಾರಸ್ವಾಮಿ ಬಡಾವಣೆಯಲ್ಲಿ ಇಂದು ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟಿಸಿ  ಮಾತನಾಡಿದ ಅವರು,  ಕಳೆದ ಬಜೆಟ್ ನಲ್ಲಿ ಹಿರಿಯ ನಾಗರಿಕರ ಕ್ಲಬ್ ಗೆ ಅನುಮೋದನೆ ನೀಡಲಾಗಿದ್ದು ಆದಷ್ಟು ಶೀಘ್ರ ಆರಂಭವಾಗಲಿವೆ. ಬೇರೆ ಬೇರೆ ಕ್ಲಬ್ ಮಾದರಿಯಲ್ಲಿ ಹಿರಿಯ ನಾಗರಿಕರಿಗಾಗಿ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗುವುದು. ಅವರಿಗೆ ಅನುಕೂಲವಾಗಬಲ್ಲ ಆಟಗಳನ್ನು ಆಡಲು, ಪತ್ರಿಕೆಗಳನ್ನು ಓದಲು ವ್ಯವಸ್ಥೆ ಕಲ್ಪಿಸಲಾಗುವುದು. ಇದಕ್ಕಾಗಿ ವರ್ಷಕ್ಕೆ ತಲಾ ೧೨ ಲಕ್ಷ ರೂಪಾಯಿಗಳನ್ನು ಒದಗಿಸಲಾಗುತ್ತದೆ ಎಂದು ಸಚಿವರು ತಿಳಿಸಿದರು.

<><*<><>*><>

ವಿಜಯಪುರ ಕೇಂದ್ರ ಬಸ್ ನಿಲ್ದಾಣಕ್ಕೆ ವೀರರಾಣಿ ಕಿತ್ತೂರು ಚೆನ್ನಮ್ಮ ಬಸ್ ನಿಲ್ದಾಣ ಎಂದು ಹೆಸರು ನಾಮಕರಣ ಮಾಡಲು ಸರ್ಕಾರ ಆದೇಶ ಹೊರಡಿಸಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ಮೂಲಕ ಮಾಹಿತಿ ನೀಡಿರುವ ಅವರು, ಶಕ್ತಿ ಯೋಜನೆ ಉದ್ಘಾಟನೆ ಸಂದರ್ಭದಲ್ಲಿ ಬಸ್ ನಿಲ್ದಾಣಕ್ಕೆ ರಾಣಿ ಚೆನ್ನಮ್ಮನವರ ಹೆಸರು ಇಡಲಾಗುವುದೆಂದು ಭರವಸೆ ನೀಡಲಾಗಿತ್ತು. ತನ್ನ ಕೋರಿಕೆ ಮನ್ನಿಸಿ ಇದೀಗ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರ ಮುತುವರ್ಜಿಯಿಂದ ವೀರರಾಣಿ ಕಿತ್ತೂರು ಚೆನ್ನಮ್ಮನವರ ಹೆಸರು ನಾಮಕರಣ ಮಾಡಲು ಆದೇಶ ಹೊರಡಿಸಿದ್ದಾರೆ. ಅಲ್ಲದೇ, ವಿಜಯಪುರ ವಿಮಾನ ನಿಲ್ದಾಣಕ್ಕೆ ವಿಶ್ವಗುರು ಬಸವೇಶ್ವರರ ಹೆಸರನ್ನು ನಾಮಕರಣ ಮಾಡಲು ತೀರ್ಮಾನಿಸಲಾಗಿದೆ. ಮಮದಾಪುರದಲ್ಲಿ ೧೨೦೦ ಎಕರೆ ಪ್ರದೇಶವನ್ನು ‘ಸಿದ್ದೇಶ್ವರ ಶ್ರೀ ಜೀವವೈವಿದ್ಯತೇಯ ಪಾರಂಪರಿಕ ಸಂರಕ್ಷಿತ ಅರಣ್ಯ ಪ್ರದೇಶ’ ಹಾಗೂ ಮಹಿಳಾ ವಿಶ್ವವಿದ್ಯಾಲಯಕ್ಕೆ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಎಂದು ನಾಮಕರಣಗೊಳಿಸಿದೆ. ವಿಜಯಪುರದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಗೆ ಆಗಮಿಸುವ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ವಿಜಯಪುರ ಕೇಂದ್ರ ಬಸ್ ನಿಲ್ದಾಣದಲ್ಲಿ ಸ್ಥಾಪಿಸಿರುವ ರಾಣಿ ಚೆನ್ನಮ್ಮನವರ ಬೃಹತ್ ಪ್ರತಿಮೆಯನ್ನು ಅನಾವರಣಗೊಳಿಸುವರು ಎಂದು  ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ೬.೪೦ ಕ್ಕೆ**